# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗುಲ್ಬರ್ಗಾ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪ-II) ಕ್ಕೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ:ನಅಇ 45 ಗುಅಪ್ರಾ:2009, ದಿ:04.06.2009
2) ಪ್ರಾಧಿಕಾರದ ಪತ್ರ ಸಂಖ್ಯೆ: ನಪ್ರಾಗು:ನಯೋಸ:ಮಹಾ ಯೋಜನೆ: 2009-10:72, ದಿನಾಂಕ:16.04.2010.
3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತ ಸಂಖ್ಯೆ:ನಗ್ರಾಯೋ:7:ಉನಿ(ಯೋವಿ):ಗುಲ್ಬರ್ಗಾ:ಮ.ಯೋ:(ಪ-II):ಅಂತಿಮ:2010ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ;05.05.2010.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಗುಲ್ಬರ್ಗಾ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪ-II) ಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ. ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಗುಲ್ಬರ್ಗಾ ನಗರಾಭಿವೃದ್ಧಿ ಪ್ರಾಧಿಕಾರವು ಗುಲ್ಬರ್ಗಾ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪ-II) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಕಡತದಲ್ಲಿ ಗುಲ್ಬರ್ಗಾ ನಗರದ ಜನಸಂಖ್ಯೆ: 2021ಕ್ಕೆ ಅಂದಾಜಿಸಲಾದ 9,00,000 ಕ್ಕೆ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಗುಲ್ಬರ್ಗಾ ನಗರದ ಸ್ಥಳೀಯ ಯೋಜನಾ ಕಾಯ್ದೆ 1961ರ ಕಲಂ (12) ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ಪಟ್ಟಣದ ಮುಂದಿನ ಯೋಜಿತ ಪ್ರಸ್ತಾಪಿಸಿರುವ 12376.21 ಹೆಕ್ಟರ್ ಪ್ರದೇಶದಲ್ಲಿ ವಸತಿಗಾಗಿ 6826.28 ಹೆಕ್ಟೇರ್, (ಶೇ.55.81), ವಾಣಿಜ್ಯಕ್ಕಾಗಿ 387.76 ಹೆಕ್ಟೇರ್ (ಶೇ.3.17), ಕೈಗಾರಿಕೆಗಾಗಿ 672.68 ಹೆಕ್ಟೇರ್ (ಶೇ.5.50), ಸಾರ್ವಜನಿಕ:ಅರೆ ಸಾರ್ವಜನಿಕ ಉಪಯೋಗಕ್ಕೆ 1282.63 ಹೆಕ್ಟೇರ್, (ಶೇ.10.49) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 1078.30 ಹೆಕ್ಟೇರ್ (ಶೇ.8.82) ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 1940.75 ಹೆಕ್ಟೇರ್ (ಶೇಕಡ 15.86), ನಾಗರೀಕ ಸೌಲಭ್ಯಕ್ಕಾಗಿ 43.08 ಹೆಕ್ಟೇರ್ (ಶೇ.0.35) ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾ ಯೋಜನೆ (ಪ-II) ನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆ (ಪ-II) ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ.

2....

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಸದರಿ ಪ್ರಸ್ತಾವನೆಯಲ್ಲಿ ವಲಯ ನಿಯಮಾವಳಿಗಳನ್ನು ಬದಲಾವಣೆ ಮಾಡುವುದು ಅವಶ್ಯವಾಗಿರುವ ಹಿನ್ನೆಲೆಯಲ್ಲಿ ಮತ್ತು ತಾತ್ಕಾಲಿಕ ಮಹಾ ಯೋಜನೆಯ ವಲಯ ನಿಯಮಾವಳಿಗೂ ಅಂತಿಮ ಅನುಮೋದನೆಗೆ ಸಲ್ಲಿಸಿರುವ ನಿಯಮಾವಳಿಯಲ್ಲಿ ಬದಲಾವಣೆ ಮಾಡಲಾಗಿದೆ. ವಲಯ ನಿಯಮಾವಳಿಯಲ್ಲಿ ಅಗತ್ಯ ನಡುಜಾಗ ಬಗ್ಗೆ National Building Code ಸೂಚಿಸಿರುವುದಕ್ಕೆ ವ್ಯತಿರಿಕ್ತವಾಗಿ ಅಳವಡಿಸಲಾಗಿದೆ. ಕವರೇಜ್ ಹಾಗೂ FAR ಗಳಲ್ಲೂ ಕೂಡ ವ್ಯತ್ಯಾಸ ಕಂಡುಬರುತ್ತದೆ. ವಾಹನ ನಿಲುಗಡೆಗೆ ಹಾಗೂ ನೆಲಮಹಡಿಯಲ್ಲಿ ಸೂಚಿಸಿರುವ ಕೆಲವು ಉಪಯೋಗಗಳನ್ನು ಬದಲಾವಣೆ ಮಾಡುವುದು ಅವಶ್ಯವಿರುತ್ತದೆ.

ಅದ್ದರಿಂದ ಮೇಲೆ ವಿವರಿಸಿರುವ ಅಂಶಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 59 ಗುಅಪ್ರಾ 2008**

**ಬೆಂಗಳೂರು, ದಿನಾಂಕ:01.12.2010**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರವು ಗುಲ್ಬರ್ಗಾ ಮಹಾ ಯೋಜನೆಗೆ ಸಂಬಂಧಿಸಿದಂತೆ ಕರಡು ವಲಯ ನಿಯಮಾವಳಿಗಳನ್ನು ತಯಾರಿಸಿ ಅದನ್ನು ಅಳವಡಿಸಿಕೊಳ್ಳುವ ಷರತ್ತಿಗೊಳಪಟ್ಟು ಮತ್ತು ಈ ಆದೇಶಕ್ಕೆ ಲಗತ್ತಿಸಿರುವ ಇತರೆ ಷರತ್ತು ಮತ್ತು ನಿಬಂದನೆಗಳಿಗೊಳಪಟ್ಟು ಗುಲ್ಬರ್ಗಾ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪರಿಷ್ಕೃತ-II) ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಪ್ರಕರಣ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡಲಾಗಿದೆ.

---

ಮಹಾ ಯೋಜನೆ (ಪ-II) ಕ್ಕೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ,

(ಎಂ.ಎಂ.ಹಿರೇಮಠ)

ಸರ್ಕಾರದ ಅದೀನ ಕಾರ್ಯದರ್ಶಿ

ನಗರಾಭಿವೃದ್ಧಿ ಇಲಾಖೆ

ಇವರಿಗೆ: ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು.